**All India Radio: Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**17.04.2025 07.35 a.m.**

**<><><><>**

ಮುಖ್ಯಾಂಶಗಳು

1. ಸುಪ್ರೀಂಕೋರ್ಟ್‌ನಲ್ಲಿಂದು ವಕ್ಫ್ ತಿದ್ದುಪಡಿ ಕಾಯ್ದೆ- ೨೦೨೫ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿದ ಅರ್ಜಿಗಳ ವಿಚಾರಣೆ ಆರಂಭ
2. ಭಾರತವು ಜಾಗತಿಕ ಮಟ್ಟದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯ ದೇಶವಾಗಿದೆ: ಕೇಂದ್ರ ಸಚಿವ ಪಿಯೂಷ್ ಗೋಯಲ್
3. ಕೇಂದ್ರ ಮೀಸಲು ಪೊಲೀಸ್ ಪಡೆಯ ೮೬ನೇ ಸಂಸ್ಥಾಪನಾ ದಿನದ ಹಿನ್ನೆಲೆಯಲ್ಲಿಂದು ಮಧ್ಯಪ್ರದೇಶದಲ್ಲಿ ವಿಶೇಷ ಕಾರ್ಯಕ್ರಮ: ಗೃಹ ಸಚಿವ ಅಮಿತ್ ಶಾ ಭಾಗಿ
4. ಕ್ರಿಕೆಟ್: ನವದೆಹಲಿಯಲ್ಲಿ ನಡೆದ ಐಪಿಎಲ್ ಪಂದ್ಯಾವಳಿಯಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ರಾಜಸ್ಥಾನ ನಡುವಿನ ಪಂದ್ಯ ಟೈ, ಸೂಪರ್ ಓವರ್‌ನಲ್ಲಿ ಡೆಲ್ಲಿ ಕ್ಯಾಪಿಟಲ್ಸ್‌ಗೆ ಗೆಲುವು
5. ಶೂಟಿಂಗ್: ಪೆರುವಿನ ಲಿಮಾದಲ್ಲಿ ನಡೆಯುತ್ತಿರುವ ಐಎಸ್‌ಎಸ್‌ಎಫ್ ವಿಶ್ವಕಪ್ ಶೂಟಿಂಗ್ ಸ್ಪರ್ಧೆಯಲ್ಲಿ ಭಾರತದ ಇಂದರ್ ಸಿಂಗ್ ಸುರುಚಿ ಮತ್ತು ಸೌರಭ್ ಚೌಧರಿಗೆ ಚಿನ್ನದ ಪದಕ

<><><><>

ವಕ್ಫ್ ತಿದ್ದುಪಡಿ ಕಾಯ್ದೆ- ೨೦೨೫ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸುವ ಅರ್ಜಿಗಳನ್ನು ಸುಪ್ರೀಂ ಕೋರ್ಟ್ ಇಂದು ವಿಚಾರಣೆ ನಡೆಸಲಿದೆ. ಸುಪ್ರೀಂ ಕೋರ್ಟ್‌ನ ವೆಬ್‌ಸೈಟ್‌ನಲ್ಲಿ ಪ್ರಕಟವಾದ ಪಟ್ಟಿಯ ಪ್ರಕಾರ, ಭಾರತದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ನೇತೃತ್ವದ ಮತ್ತು ನ್ಯಾಯಮೂರ್ತಿಗಳಾದ ಸಂಜಯ್ ಕುಮಾರ್ ಮತ್ತು ಕೆ.ವಿ.ವಿಶ್ವನಾಥನ್ ಇಂದು ಈ ವಿಷಯವನ್ನು ವಿಚಾರಣೆಗೆ ಕೈಗೆತ್ತಿಕೊಳ್ಳಲಿದ್ದಾರೆ ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ೧೯೯೫ ರ ವಕ್ಫ್ ಕಾಯ್ದೆಯಲ್ಲಿ ಇತ್ತೀಚೆಗೆ ಪರಿಚಯಿಸಲಾದ ತಿದ್ದುಪಡಿಗಳ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿ, ಸುಪ್ರೀಂ ಕೋರ್ಟ್‌ಗೆ ಹಲವಾರು ಅರ್ಜಿಗಳು ಸಲ್ಲಿಕೆಯಾಗಿವೆ.

<><><><>

ಭಾರತವು ಜಾಗತಿಕಮಟ್ಟದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಮಾರುಕಟ್ಟೆ ಮತ್ತು ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯ ದೇಶವಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಭಾರತ-ಮಧ್ಯಪ್ರಾಚ್ಯ-ಯುರೋಪ್ ಆರ್ಥಿಕ ಕಾರಿಡಾರ್ -ಐಎಂಇಸಿ ಸಮಾವೇಶ ೨೦೨೫ ಅನ್ನು ಉದ್ದೇಶಿಸಿ ಸಚಿವರು ಮಾತನಾಡಿದರು. ಸರ್ಕಾರವು ನ್ಯಾಯಯುತ ಒಪ್ಪಂದವನ್ನು ಪಡೆಯುವ ದೇಶಗಳೊಂದಿಗೆ ಭಾರತದ ವ್ಯಾಪಾರ ಸಂಬಂಧಗಳನ್ನು ವಿಸ್ತರಿಸುತ್ತಿದೆ ಎಂದು ಸಚಿವರು ಮಾಹಿತಿ ನೀಡಿದರು. ಸರ್ಕಾರವು ಸಮಾನ ಮತ್ತು ಸಮತೋಲಿತ ಮುಕ್ತ ವ್ಯಾಪಾರ ಒಪ್ಪಂದಗಳನ್ನು ಸ್ಥಾಪಿಸಬಹುದಾದ ದೇಶಗಳ ಸಂಬಂಧಗಳನ್ನು ಬಲಪಡಿಸುತ್ತಿದೆ. ಒಮಾನ್ ಜೊತೆ ಈಗಾಗಲೇ ಚರ್ಚೆ ನಡೆಸಲಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ರಾಷ್ಟ್ರಗಳ ಪ್ರತಿನಿಧಿಗಳ ಜೊತೆ ಮಾತುಕತೆ ನಡೆಸಲಾಗುವುದು ಎಂದು ವಿವರಿಸಿದರು. ಈ ನಿಟ್ಟಿನಲ್ಲಿ ಪರಿಣಾಮ ಕ್ರಮಗಳನ್ನು ಕೈಗೊಳ್ಳಲು ನಾವು ಬದ್ಧವಾಗಿದ್ದೇವೆ. ಇನ್ನೂ ಕೆಲವು ಮಾರ್ಗಸೂಚಿ ಜಾರಿ ಮಾಡಲು ಎಲ್ಲ ರೀತಿಯ ತಯಾರಿ ನಡೆಸಿದ್ದೇವೆ ಎಂದು ಸಚಿವ ಪಿಯೂಷ್ ಗೋಯಲ್ ಸ್ಪಷ್ಟಪಡಿಸಿದ್ದಾರೆ.

<><><><>

ಕೇಂದ್ರ ಮೀಸಲು ಪೊಲೀಸ್ ಪಡೆಯ ೮೬ನೇ ಸಂಸ್ಥಾಪನಾ ದಿನದ ಹಿನ್ನೆಲೆಯಲ್ಲಿ ಸರಣಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಮಧ್ಯಪ್ರದೇಶದ ನೀಮಚ್‌ನಲ್ಲಿ ಇಂದು ವಿಶೇಷ ಕಾರ್ಯಕ್ರಮ ನಡೆಯಲಿದೆ. ಮುಖ್ಯ ಅತಿಥಿಯಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಭಾಗವಹಿಸಲಿದ್ದಾರೆ ಮತ್ತು ಮಧ್ಯಪ್ರದೇಶ ಮುಖ್ಯಮಂತ್ರಿ ಡಾ. ಮೋಹನ್ ಯಾದವ್ ವಿಶೇಷ ಅತಿಥಿಯಾಗಿ ಭಾಗವಹಿಸಲಿದ್ದಾರೆ. ನೀಮಚ್‌ನ ಸಿಆರ್‌ಪಿಎಫ್ ಗ್ರೂಪ್ ಸೆಂಟರ್‌ನಲ್ಲಿ ಆಯೋಜಿಸಲಾದ ಸಿಆರ್‌ಪಿಎಫ್ ಫೌಂಡೇಶನ್ ಡೇ ಪೆರೇಡ್‌ನಲ್ಲಿ ಸಿಆರ್‌ಪಿಎಫ್‌ನ ಎಂಟು ತುಕಡಿಗಳು ಭಾಗವಹಿಸಲಿವೆ. ಈ ಸಂದರ್ಭದಲ್ಲಿ, ಗೃಹ ಸಚಿವರು ಸಿಆರ್‌ಪಿಎಫ್ ಸಿಬ್ಬಂದಿಗೆ ಶೌರ್ಯ ಪದಕಗಳನ್ನು ಪ್ರದಾನ ಮಾಡಲಿದ್ದಾರೆ. 'ಶಹೀದ್ ಸ್ಥಳ'ದಲ್ಲಿ ಪಡೆಯ ಧೈರ್ಯಶಾಲಿ ಹುತಾತ್ಮರಿಗೆ ಗೃಹ ಸಚಿವರು ಗೌರವ ಸಲ್ಲಿಸಲಿದ್ದಾರೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ಹುತಾತ್ಮರ ಕುಟುಂಬಗಳು, ಪೆರೇಡ್ ಕಮಾಂಡರ್‌ಗಳು ಮತ್ತು ಯೋಧರೊಂದಿಗೆ ಸಂವಾದ ನಡೆಸಲಿದ್ದಾರೆ. ಸಿಆರ್‌ಪಿಎಫ್‌ನ ನೀಮಚ್ ಕ್ಯಾಂಪಸ್‌ನಲ್ಲಿ, ಕೇಂದ್ರ ತರಬೇತಿ ಕಾಲೇಜು,

ನೇಮಕಾತಿ ತರಬೇತಿ ಕೇಂದ್ರ, ಗುಂಪು ಕೇಂದ್ರ, ಶ್ರೇಣಿ ಕಚೇರಿ, ಸಂಯೋಜಿತ ಆಸ್ಪತ್ರೆ, ೧ ನೇ ಬೆಟಾಲಿಯನ್ ಮತ್ತು ೪ ಸಿಗ್ನಲ್ ಬೆಟಾಲಿಯನ್‌ಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ.

<><><>

ಇಂದು ವಿಶ್ವ ಹಿಮೋಫಿಲಿಯಾ ದಿನ. ಮಹಿಳೆಯರು ಮತ್ತು ಬಾಲಕಿಯರಲ್ಲಿಯೂ ರಕ್ತಸ್ರಾವ ಎಂಬುದು ಈ ವರ್ಷದ ಘೋಷ ವಾಕ್ಯವಾಗಿದೆ. ಈ ಕುರಿತು ಜಾಗೃತಿ ಮೂಡಿಸುವುದು ಹಾಗೂ ಮಹಿಳೆಯರ ಜೀವನ ಮಟ್ಟ ಉತ್ತಮಗೊಳಿಸುವ ಉದ್ದೇಶವನ್ನು ಹೊಂದಲಾಗಿದೆ. ಈ ನಿಟ್ಟಿನಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಹಾಗೂ ಇತರೆ ಸಂಘ ಸಂಸ್ಥೆಗಳು ನಿರಂತರ ಅಭಿಯಾನಗಳನ್ನು ಕೈಗೊಳ್ಳುತ್ತಿದೆ. ಭಾರತದಲ್ಲಿಯೂ ಇಂದು ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಕರ್ನಾಟಕದ ಬೆಂಗಳೂರು, ತುಮಕೂರು ಸೇರಿದಂತೆ ರಾಜ್ಯದ ವಿವಿದೆಡೆ ಒಂದು ತಿಂಗಳ ಕಾಲ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಈ ಮೂಲಕ ಜನರಲ್ಲಿ ಅರಿವು ಮೂಡಿಸಲಾಗುತ್ತದೆ.

<><><>

ಪೊಲೀಸ್ ವ್ಯವಸ್ಥೆ, ನ್ಯಾಯ ವಿತರಣೆ, ಜೈಲು ನಿರ್ವಹಣೆ ಮತ್ತು ಕಾನೂನು ನೆರವಿನಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ. ಈ ಕುರಿತು ಪ್ರಕಟವಾದ ವರದಿಗಳು ಕರ್ನಾಟಕ ವ್ಯವಸ್ಥೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿರುವುದು ಸ್ವಾಗತಾರ್ಹ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಐಜೆಆರ್ - ೨೦೨೫ ನಾಲ್ಕನೇ ಆವೃತ್ತಿಯ ವರದಿಯಲ್ಲಿ ನ್ಯಾಯದಾನ ನೀಡಿಕೆಯಲ್ಲಿ ಕರ್ನಾಟಕ ಪೊಲೀಸರು ದೇಶದಲ್ಲೇ ಅಗ್ರಸ್ಥಾನದಲ್ಲಿದ್ದಾರೆ ಎಂದು ತಿಳಿಸಲಾಗಿತ್ತು. ಈ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಮಾಹಿತಿ ಹಂಚಿಕೊಂಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ದೇಶದ ೧೮ ದೊಡ್ಡ ಮತ್ತು ಮಧ್ಯಮ ಗಾತ್ರದ ರಾಜ್ಯಗಳ ಪೈಕಿ ಕರ್ನಾಟಕ ಅಗ್ರಸ್ಥಾನದಲ್ಲಿದೆ ಎಂದು ತಿಳಿಸಿದ್ದಾರೆ. ನ್ಯಾಯದಾನ ನೀಡಿಕೆಯಲ್ಲಿ ಕರ್ನಾಟಕ ಪೊಲೀಸರು ದೇಶದಲ್ಲೇ ಅಗ್ರಸ್ಥಾನದಲ್ಲಿದ್ದಾರೆ ಎಂದು ಟಾಟಾ ಟ್ರಸ್ಟ್ ವರದಿ ಹೇಳಿದೆ. ಇತ್ತೀಚೆಗೆ ಬಿಡುಗಡೆಯಾದ ಐಜೆಆರ್-೨೦೨೫ ನಾಲ್ಕನೇ ಆವೃತ್ತಿಯಲ್ಲಿ, ದೇಶದ ವಿವಿಧ ರಾಜ್ಯಗಳಲ್ಲಿನ ಪೊಲೀಸ್ ವ್ಯವಸ್ಥೆ, ನ್ಯಾಯ ವಿತರಣೆ, ಜೈಲು ನಿರ್ವಹಣೆ ಮತ್ತು ಕಾನೂನು ನೆರವಿನ ಅಂಶಗಳನ್ನು ಪರಿಗಣಿಸಿ ಈ ವರದಿ ತಯಾರಿಸಲಾಗಿದೆ. ಕರ್ನಾಟಕವು ೧೮ ದೊಡ್ಡ ಮತ್ತು ಮಧ್ಯಮ ಗಾತ್ರದ ರಾಜ್ಯಗಳಲ್ಲಿ ಮೊದಲ ಸ್ಥಾನದಲ್ಲಿದೆ. ಕಳೆದ ಆವೃತ್ತಿಯಿಂದ ತನ್ನ ಸ್ಥಾನವನ್ನು ಉಳಿಸಿಕೊಂಡಿದೆ. ಪೊಲೀಸ್ ಮತ್ತು ನ್ಯಾಯಾಂಗ ಎರಡರಲ್ಲೂ ಎಸ್‌ಸಿ, ಎಸ್‌ಟಿ ಮತ್ತು ಒಬಿಸಿಗಳಿಗೆ

ಮೀಸಲಾತಿ ಕೋಟಾ ಪೂರೈಸಿರುವ ಏಕೈಕ ರಾಜ್ಯ ಕರ್ನಾಟಕವಾಗಿದೆ. ಎಲ್ಲಾ ದೊಡ್ಡ ರಾಜ್ಯಗಳಲ್ಲಿ ಶೇಕಡ ೧.೨ ರಷ್ಟು ಕಡಿಮೆ ಅಧಿಕಾರಿ ಮಟ್ಟದ ಖಾಲಿ ಹುದ್ದೆಗಳನ್ನು ಹೊಂದಿರುವ ರಾಜ್ಯ ಕರ್ನಾಟಕವಾಗಿದೆ. ಕರ್ನಾಟಕದ ನಂತರ ಆಂಧ್ರಪ್ರದೇಶ, ತೆಲಂಗಾಣ, ಕೇರಳ ಮತ್ತು ತಮಿಳುನಾಡು ರಾಜ್ಯಗಳಿವೆ. ಅಗ್ರ ಶ್ರೇಯಾಂಕದ ರಾಜ್ಯವಾಗಿದ್ದರೂ, ಜೈಲುಗಳು, ಕಾನೂನು ನೆರವು ಮತ್ತು ಪೊಲೀಸ್ ಇಲಾಖೆಯಲ್ಲಿ ಮಹಿಳೆಯರ ನೇಮಕ ವಿಚಾರದಲ್ಲಿ ಕರ್ನಾಟಕದ ಸಾಧನೆ ಹಿಂದುಳಿದಿದೆ. ಐಜೆಆರ್ ೨೦೨೫ ರ ಪ್ರಕಾರ, 'ಕರ್ನಾಟಕ ಜೈಲುಗಳಲ್ಲಿ ಶೇಕಡ ೮೦ರಷ್ಟು ವಿಚಾರಣಾಧೀನ ಕೈದಿಗಳಿದ್ದಾರೆ. ಇದು ೨೦೧೫ ರಿಂದ ಅತ್ಯಧಿಕವಾಗಿದೆ. ಗ್ರಾಮ ಮಟ್ಟದಲ್ಲಿ ಕಾನೂನು ನೆರವಿನ ಕೊರತೆ ಇದಕ್ಕೆ ಕಾರಣವಿರಬಹುದು. ಗ್ರಾಮ ಮಟ್ಟದಲ್ಲಿ ಕಾನೂನು ಸೇವಾ ಕೇಂದ್ರಗಳ ಸಂಖ್ಯೆಯು ೧೫೭ ರಿಂದ ೩೨ ಕ್ಕೆ ಇಳಿದಿದೆ" ಎಂದು ವರದಿಯಲ್ಲಿ ತಿಳಿಸಲಾಗಿದೆ. ರಾಜ್ಯದಲ್ಲಿ ಪೊಲೀಸರ ನೇಮಕಾತಿಯಲ್ಲಿ ಮಹಿಳೆಯರ ಪಾಲು ಶೇಕಡ ೨೫ರಷ್ಟಿದೆ. ವಾಸ್ತವದಲ್ಲಿ ಕರ್ನಾಟಕ ಪೊಲೀಸರಲ್ಲಿ ಪುರುಷ ಪ್ರಾಬಲ್ಯವಿದೆ. ಪೊಲೀಸರಲ್ಲಿ ಶೇಕಡ ೯ ರಷ್ಟು ಮತ್ತು ಅಧಿಕಾರಿ ಮಟ್ಟದಲ್ಲಿ ಶೇಕಡ ೭ ರಷ್ಟು ಮಹಿಳೆಯರಿದ್ದಾರೆ ಎಂದು ವರದಿಯಲ್ಲಿ ವಿವರಿಸಲಾಗಿದೆ. ೨.೪ ಲಕ್ಷ ಮಹಿಳಾ ಪೊಲೀಸರ ಪೈಕಿ ೯೭೦ ಮಂದಿ ಮಾತ್ರ ಐಪಿಎಸ್‌ನಲ್ಲಿದ್ದರೆ, ೨೪ ಸಾವಿರದ ೩೨೨ ಐಪಿಎಸ್ ಅಧಿಕಾರಿಯೇತರ ಹುದ್ದೆಗಳಾದ ಸಬ್‌ಇನ್ಸ್‌ಪೆಕ್ಟರ್, ಇನ್‌ಸ್ಪೆಕ್ಟರ್ ಮತ್ತು ಉಪ ಪೊಲೀಸ್ ವರಿಷ್ಠಾಧಿಕಾರಿ ಹುದ್ದೆಯಲ್ಲಿದ್ದಾರೆ ಎಂದು ವರದಿಯಲ್ಲಿ ಮಾಹಿತಿ ನೀಡಲಾಗಿದೆ.

<><><><>

ನವದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ೨೦೨೫ ಟೂರ್ನಿಯ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ರಾಜಸ್ಥಾನ ನಡುವಿನ ಪಂದ್ಯ ಟೈ ಆಗಿದ್ದು, ನಂತರ ನಡೆದ ಸೂಪರ್ ಓವರ್‌ನಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಗೆಲುವು ಸಾಧಿಸಿತು. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ನಿಗದಿತ ೨೦ ಓವರ್ ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೮೮ ರನ್ ಗಳಿಸಿತು. ಅಭಿಷೇಕ್ ಪೊರೆಲ್ ೧ ಸಿಕ್ಸರ್, ೫ ಬೌಂಡರಿಗಳೊಂದಿಗೆ ೩೭ ಎಸೆತಗಳಲ್ಲಿ ೪೯ ರನ್ ಗಳಿಸಿದರು. ನಂತರ ಬಂದ ಕೆಎಲ್ ರಾಹಲ್ ಎರಡು ಸಿಕ್ಸರ್, ಎರಡು ಬೌಂಡರಿಗಳೊಂದಿಗೆ ೩೨ ಎಸೆತಗಳಲ್ಲಿ ೩೮ ಮತ್ತು ನಾಯಕ ಅಕ್ಸರ್ ಪಟೇಲ್ ೩೪ ರನ್ ಗಳಿಸಿದರು. ತ್ರಿಸ್ಟನ್ ಸ್ಟುಬ್ಸ್ ಹಾಗೂ ಅಶುತೋಷ್ ಶರ್ಮಾ ಔಟಾಗದೆ ಕ್ರಮವಾಗಿ ೩೪ ಮತ್ತು ೧೫ ರನ್ ಗಳಿಸಿದರು. ಡೆಲ್ಲಿ ಕ್ಯಾಪಿಟಲ್ಸ್ ನಿಗದಿತ ೨೦

ಓವರ್ ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೮೮ ರನ್ ಕಲೆ ಹಾಕಿತು. ರಾಜಸ್ಥಾನ ರಾಯಲ್ಸ್ ಪರ ಜೋಫ್ರಾ ಅರ್ಚರ್ ೨ ವಿಕೆಟ್ ಪಡೆದರೆ, ಮಹೀಶ್ ತೀಕ್ಷ್ಣ ಮತ್ತು ವನಿದು ಹಸರಂಗ ತಲಾ ಒಂದು ವಿಕೆಟ್ ಪಡೆದರು. ಡೆಲ್ಲಿ ಕ್ಯಾಪಿಟಲ್ಸ್ ನೀಡಿದ ೧೮೯ ರನ್‌ಗಳ ಗೆಲುವಿನ ಗುರಿ ಬೆನ್ನಟ್ಟಿದ್ದ ರಾಜಸ್ಥಾನ ರಾಯಲ್ಸ್ ಪರ ಆರಂಭಿಕ ಆಟಗಾರ ಯಶಸ್ವಿ ಜೈಸ್ವಾಲ್ ೪ ಸಿಕ್ಸರ್, ೩ ಬೌಂಡರಿಗಳೊಂದಿಗೆ ೩೮ ಎಸೆತಗಳಲ್ಲಿ ೫೧ ರನ್ ಗಳಿಸಿದರು. ನಾಯಕ ಸಂಜು ಸ್ಯಾಮ್ಸನ್ ೩೧ ರನ್ ಗಳಿಸಿದಾಗ ಗಾಯಗೊಂಡು ಅರ್ಧಕ್ಕೆ ಹೊರನಡೆದರು. ಇಂದು ರಾತ್ರಿ ಮುಂಬೈನಲ್ಲಿ ನಡೆಯಲಿರುವ ಐಪಿಎಲ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಸನ್ ರೈಸರ್ಸ್ ಹೈದಾರಾಬಾದ್ ತಂಡ ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ.

<><><><>

ಪೆರುವಿನ ಲಿಮಾದಲ್ಲಿ ನಡೆಯುತ್ತಿರುವ ೨೦೨೫ರ ಐಎಸ್‌ಎಸ್‌ಎಫ್ ವಿಶ್ವಕಪ್ ಶೂಟಿಂಗ್ ಸ್ಪರ್ಧೆಯಲ್ಲಿ ಭಾರತದ ಜೋಡಿ ಇಂದರ್ ಸಿಂಗ್ ಸುರುಚಿ ಮತ್ತು ಸೌರಭ್ ಚೌಧರಿ ಚಿನ್ನದ ಪದಕ ಗಳಿಸಿದ್ದಾರೆ. ಇಂದು, ರೈಜಾ ಧಿಲ್ಲಾನ್ ಸ್ಕೀಟ್ ಮಹಿಳಾ ಫೈನಲ್‌ನಲ್ಲಿ ಸ್ಪರ್ಧಿಸಲಿದ್ದಾರೆ. ಅಂತಿಮ ಹಣಾಹಣಿ ಭಾರತೀಯ ಕಾಲಮಾನ ಮಧ್ಯಾಹ್ನ ೧:೩೦ ಕ್ಕೆ ಪ್ರಾರಂಭವಾಗಲಿದೆ.

<><><><>